ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ನೀಡುತ್ತಿರುವ ಸಾಲದ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-

915 (1024) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರವು ಹಾಲು ಉತ್ಪಾದಕರ ಸಹಕಾರ ಸಂಘಗಳ ಮೂಲಕ ಸಂಘದ ಸದಸ್ಯರಿಗೆ ಸಾಲ ನೀಡುವ ಯೋಜನೆಯನ್ನು ಜಾರಿಗೊಳಿಸಿದೆಯೇ; ಜಾರಿಗೊಳಿಸಿದ್ದಲ್ಲಿ, ಈ ಯೋಜನೆಯು ಯಾವ ದಿನಾಂಕದಿಂದ ಜಾರಿಗೆ ಬಂದಿದೆ; ಮತ್ತು ಇದಕ್ಕೆ ರೂಪಿಸಿರುವ ಮಾನದಂಡಗಳೇನು; (ಆದೇಶಗಳ ಸಹಿತ ಸಂಪೂರ್ಣ ವಿವರ ನೀಡುವುದು)

(ಆ) ಈ ಯೋಜನೆಯಡಿ ಹಾಸನ ಜಿಲ್ಲೆಯಲ್ಲಿ ಎಷ್ಟು ಜನರಿಗೆ ಎಷ್ಟು ಮೊತ್ತವನ್ನು ಇಲ್ಲಿಯವರೆಗೆ ಸಾಲವಾಗಿ ನೀಡಲಾಗಿದೆ; (ಫಲಾನುಭವಿ ಹೆಸರು ಮತ್ತು ಸಂಘದ ವಿವರಗಳೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಸದಸ್ಯರಿಗೆ ಸಾಲ ವಿತರಣೆ ಮಾಡುವಾಗ ಸರ್ಕಾರದ ಮಾರ್ಗಸೂಚಿಗಳನ್ನು ಪಾಲನೆ ಮಾಡದೆ ತಾರತಮ್ಯ ನೀತಿ ಅನುಸರಿಸುತ್ತಿರುವುದರಿಂದ ಸದಸ್ಯರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಹಾಸನ ಜಿಲ್ಲೆಯಲ್ಲಿ ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ; ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ಪ್ರಕರಣವಾರು ಮಾಹಿತಿ ನೀಡುವುದು)